ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22867172 / 22866302
ಫ್ಯಾಕ್ಸ್: 080-22863576 / 22861665
Email: dmablr@gmail.com
Website:www.municipaladmn.gov.in
೯ನೇ ಮಹಡಿ, ವಿಶ್ವೇಶ್ವರಯ್ಯಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

6852/DMA/122/SWM/2014-15 ದಿನಾಂಕ:10 .08.2026.

## :: ಸುತ್ತೋಲೆ ::

ವಿಷಯ: ರಾಜ್ಯದಾದ್ಯಂತ ಪ್ಲಾಸ್ಟರ್ ಆಫ್ ಪ್ಯಾರೀಸ್ (ಪಿ.ಓ.ಪಿ) ಹಾಗೂ ರಾಸಾಯನಿಕ ಗುಣಗಳುಳ್ಳ ವಸ್ತುಗಳನ್ನು ಬಳಸಿ ತಯಾರಿಸಲಾದ ಗಣೇಶ ವಿಗ್ರಹಗಳ ಉತ್ಪಾದನೆ, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯನ್ನು ನಿಷೇಧಿಸುವ ಕುರಿತು.

ಉಲ್ಲೇಖ: ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರವರ ಪತ್ರ ಸಂಖ್ಯೆ:ಮಾನಿಮಂ/04/ಜಾ.ಕೋ/2026-27/1862, ದಿನಾಂಕ:05.08.2026.

******

ರಾಜ್ಯದಲ್ಲಿ ಪರಿಸರ ಸ್ನೇಹಿ ಗೌರಿ-ಗಣೇಶ ಹಬ್ಬವನ್ನು ಆಚರಿಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕೆಳಕಂಡ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ. ಈ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಸದರಿ ಮಾರ್ಗಸೂಚಿಯನ್ವಯ ಕೆಳಕಂಡ ಕ್ರಮಗಳನ್ನು ಜಾರಿಗೊಳಿಸಬೇಕಾಗಿರುತ್ತದೆ.

1. ಪ್ಲಾಸ್ಟರ್ ಆಫ್ ಪ್ಯಾರಿಸ್ (POP) ಅಥವಾ ಯಾವುದೇ ರಾಸಾಯನಿಕ ವಸ್ತುಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳ ತಯಾರಿಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿದೆ.
2. POP ಗಣೇಶ ಮೂರ್ತಿಗಳ ಸಂಗ್ರಹಣೆ, ಮಾರಾಟ ವಿತರಣೆ ಹಾಗೂ ಸಾರ್ವಜನಿಕ ಪ್ರದರ್ಶನವನ್ನು ಅನುಮತಿಸಲಾಗುವುದಿಲ್ಲ.
3. ವಿಷಕಾರಿ ಅಥವಾ ಭಾರ ಲೋಹಗಳನ್ನು ಒಳಗೊಂಡಿರುವ ರಾಸಾಯನಿಕ ಬಣ್ಣಗಳಿಂದ ತಯಾರಿಸಲಾದ ಮೂರ್ತಿಗಳ ಉತ್ಪಾದನೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲು ಕ್ರಮವಹಿಸುವುದು.
4. ಸಾರ್ವಜನಿಕರು ಹಾಗೂ ಗಣೇಶೋತ್ಸವ ಸಮಿತಿಗಳು ನೈಸರ್ಗಿಕ ಮಣ್ಣು (Clay) ಹಾಗೂ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳನ್ನು ಮಾತ್ರ ಬಳಸುವುದು.
5. ನೈಸರ್ಗಿಕ ಹಾಗೂ ವಿಷರಹಿತ ಬಣ್ಣಗಳಿಂದ ಅಲಂಕರಿಸಲಾದ ಮೂರ್ತಿಗಳಿಗೆ ಮಾತ್ರ ಆದ್ಯತೆ ನೀಡುವುದು.
6. ಯಾವುದೇ ಪರಿಸ್ಥಿತಿಯಲ್ಲಿಯೂ POP ಮೂರ್ತಿಗಳನ್ನು ಕೆರೆ, ನದಿ, ಕಾಲುವೆ, ಜಲಾಶಯ ಅಥವಾ ಇತರೆ ಜಲಮೂಲಗಳಲ್ಲಿ ವಿಸರ್ಜಿಸದಂತೆ ಕ್ರಮವಹಿಸುವುದು.
7. ಜಿಲ್ಲಾಧಿಕಾರಿಗಳು, ಪೊಲೀಸ್ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಅಧಿಕಾರಿಗಳು ಜಂಟಿಯಾಗಿ ಈ ಆದೇಶದ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡುವುದು.
8. ನಿಷೇಧಿತ ಮೂರ್ತಿಗಳ ಉತ್ಪಾದನೆ ಅಥವಾ ಮಾರಾಟ ಕಂಡುಬಂದಲ್ಲಿ ಸಂಬಂಧಿತ ಕಾನೂನುಗಳಡಿ ವಶಪಡಿಸಿಕೊಳ್ಳುವ ಹಾಗೂ ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು.
9. ಎಲ್ಲಾ ವ್ಯಾಪಾರಿಗಳು, ತಯಾರಕರು ಹಾಗೂ ಗಣೇಶೋತ್ಸವ ಸಮಿತಿಗಳು ಈ ಸುತ್ತೋಲೆಯಲ್ಲಿರುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

10. ಪರಿಸರ ಸ್ನೇಹಿ ಗಣೇಶ ಹಬ್ಬದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸ್ಥಳೀಯ ಸಂಸ್ಥೆಗಳು, ಶಾಲೆಗಳು, ಕಾಲೇಜುಗಳು ಹಾಗೂ ಸ್ವಯಂಸೇವಾ ಸಂಘಟನೆಗಳ ಮೂಲಕ ಜಾಗೃತಿ ಮೂಡಿಸುವುದು.

ಮಾನ್ಯ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ-ರಾಜ್ಯ ಮಟ್ಟದ ಸಮಿತಿ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಜಾರಿಗೊಳಿಸಿರುವ ವಿವರವಾದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸುವಂತೆ ಸೂಚಿಸಿದೆ.

10.8.26

ನಿರ್ದೇಶಕರು
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
2. ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳ ಆಯುಕ್ತರುಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ನಗರಾಭಿವೃದ್ಧಿ ಕೋಶಗಳ ಯೋಜನಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿಗಳ ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನುಮಾಹಿತಿಗಾಗಿ,

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸದಸ್ಯ ಕಾರ್ಯದರ್ಶಿಗಳು, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ "ಪರಿಸರ ಭವನ" ಚರ್ಚ್ ಸ್ಟ್ರೀಟ್ ರಸ್ತೆ ಬೆಂಗಳೂರು.
3. ಕಛೇರಿ ಪ್ರತಿ.

ಹೆಲ್ಪ್‌ಲೈನ್ / Helpline : 080-25582559
ಈಮೇಲ್ / Email : contact@kspcb.gov.in
ವೆಬ್‌ಸೈಟ್ / Website : kspcb.karnataka.gov.in

☎ 080-25581383, 25589112
080-25589113, 25589114

# ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
# Karnataka State Pollution Control Board

"ಪರಿಸರ ಭವನ", 1 ರಿಂದ 5ನೇ ಮಹಡಿಗಳು, ನಂ. 49, ಚರ್ಚ್ ಸ್ಟ್ರೀಟ್, ಬೆಂಗಳೂರು - 560 001, ಕರ್ನಾಟಕ ರಾಜ್ಯ, ಭಾರತ
"Parisara Bhavan", 1st to 5th Floor, # 49, Church Street, Bangalore - 560 001, Karnataka State, India

ಸಂಖ್ಯೆ:ಮಾನಿಮಂ/04/ಜಾ.ಕೋ/2026-27/ 1862 ದಿನಾಂಕ: 05 AUG 2026

## ಸುತ್ತೋಲೆ

**ವಿಷಯ:** 2026ನೇ ಸಾಲಿನ ಪರಿಸರ ಸ್ನೇಹಿ ಗಣೇಶ ಹಬ್ಬದ ಅಂಗವಾಗಿ ಕರ್ನಾಟಕ ರಾಜ್ಯಾದಾದ್ಯಂತ ಪ್ಲಾಸ್ಟರ್ ಆಫ್ ಪ್ಯಾರೀಸ್ (ಪಿ.ಓ.ಪಿ) ಹಾಗೂ ರಾಸಾಯನಿಕ ಗುಣಗಳುಳ್ಳ ವಸ್ತುಗಳನ್ನು ಬಳಸಿ ತಯಾರಿಸಲಾದ ಗಣೇಶ ವಿಗ್ರಹಗಳ ಉತ್ಪಾದನೆ, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯನ್ನು ನಿಷೇಧಿಸುವ ಬಗ್ಗೆ.

**ಉಲ್ಲೇಖ:**
1) ಜಲ (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಅಧಿನಿಯಮ, 1974.
2) ವಾಯು (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಅಧಿನಿಯಮ, 1981.
3) ಪರಿಸರ (ಸಂರಕ್ಷಣೆ) ಅಧಿನಿಯಮ, 1986.
4) ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳ ಹೊರಡಿಸಿರುವ ಪರಿಸರ ಸ್ನೇಹಿ ಗಣೇಶ ಹಬ್ಬದ ಪ್ರಯುಕ್ತ ಹೊರಡಿಸಿರುವ ಮಾರ್ಗಸೂಚಿಯ ದಿನಾಂಕ 12/05/2020.
5) ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮಗಳು, 2016 ಹಾಗೂ ತಿದ್ದುಪಡಿಗಳು.
6) ಸರ್ಕಾರದ ಆದೇಶ ಸಂಖ್ಯೆ:ಅಪಜೀ 134 ಇಎನ್‌ಜಿ 2023, ಬೆಂಗಳೂರು, ದಿನಾಂಕ 15/09/2023.
7) ಘನ ತ್ಯಾಜ್ಯ ನಿರ್ವಹಣಾ ನಿಯಮಗಳು, 2026.

**-**-**-**

ಪರಿಸರ ಸ್ನೇಹಿ ಗಣೇಶ ಹಬ್ಬವನ್ನು ರಾಜ್ಯದಾದ್ಯಂತ ಭಕ್ತಿ ಮತ್ತು ಸಂಭ್ರಮದಿಂದ ಆಚರಿಸಲಾಗುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ (POP) ಹಾಗೂ ವಿವಿಧ ರಾಸಾಯನಿಕ ಬಣ್ಣಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳ ಬಳಕೆಯಿಂದ ಕೆರೆ, ನದಿ ಹಾಗೂ ಇತರೆ ಜಲಮೂಲಗಳಲ್ಲಿ ನೀರಿನ ಗುಣಮಟ್ಟ ಕುಸಿಯುತ್ತಿರುವುದು ಹಾಗೂ ಜಲಚರ ಜೀವಿಗಳ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದು ಕಂಡುಬಂದಿದೆ.

ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ರಾಜ್ಯ ವ್ಯಾಪ್ತಿಯೊಳಗಿನ ಕಡಲು ಅಥವಾ ಸಮುದ್ರ ಮತ್ತು ರಾಜ್ಯದ ನೀರಿನ ಇತರೆ ಮೂಲಗಳಾದ ನದಿ, ತೊರೆ, ಹಳ್ಳ, ಕೆರೆ, ಬಾವಿ, ಇವುಗಳ ನೀರು ಮಾಲಿನ್ಯಗೊಳಗಾಗದಂತೆ ಸಂರಕ್ಷಿಸುವ ಉದ್ದೇಶದಿಂದ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ

ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳು ಹಾಗೂ ಅದೇ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಇತರ ವಿಗ್ರಹಗಳ ಉತ್ಪಾದನೆ, ಮಾರಾಟ ಹಾಗೂ ಅವುಗಳನ್ನು ಮೇಲೆ ತಿಳಿಸಿದ ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ರಾಜ್ಯಾದಾದ್ಯಂತ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಪರಿಸರ ಸಂರಕ್ಷಣೆ, ಸಾರ್ವಜನಿಕ ಆರೋಗ್ಯ ಹಾಗೂ ಜಲಮೂಲಗಳ ರಕ್ಷಣೆಯನ್ನು ಗಮನದಲ್ಲಿಟ್ಟುಕೊಂಡು, 2026ನೇ ಸಾಲಿನ ಗಣೇಶ ಹಬ್ಬದ ಸಂದರ್ಭದಲ್ಲಿ ರಾಜ್ಯದಾದ್ಯಂತ ಪರಿಸರ ಸ್ನೇಹಿ ಆಚರಣೆಯನ್ನು ಉತ್ತೇಜಿಸುವ ಉದ್ದೇಶದಿಂದ ಕೆಳಕಂಡ ನಿರ್ದೇಶನಗಳನ್ನು ಹೊರಡಿಸಲಾಗುತ್ತಿದೆ.

**ನಿರ್ದೇಶನಗಳು**

1) ಪ್ಲಾಸ್ಟರ್ ಆಫ್ ಪ್ಯಾರಿಸ್ (POP) ಅಥವಾ ಯಾವುದೇ ರಾಸಾಯನಿಕ ವಸ್ತುಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳ ತಯಾರಿಕೆಯನ್ನು ರಾಜ್ಯದಾದ್ಯಂತ ನಿಷೇಧಿಸಲಾಗಿದೆ.
2) POP ಗಣೇಶ ಮೂರ್ತಿಗಳ ಸಂಗ್ರಹಣೆ, ಮಾರಾಟ, ವಿತರಣೆ ಹಾಗೂ ಸಾರ್ವಜನಿಕ ಪ್ರದರ್ಶನವನ್ನು ಅನುಮತಿಸಲಾಗುವುದಿಲ್ಲ.
3) ವಿಷಕಾರಿ ಅಥವಾ ಭಾರ ಲೋಹಗಳನ್ನು ಒಳಗೊಂಡಿರುವ ರಾಸಾಯನಿಕ ಬಣ್ಣಗಳಿಂದ ತಯಾರಿಸಲಾದ ಮೂರ್ತಿಗಳ ಉತ್ಪಾದನೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.
4) ಸಾರ್ವಜನಿಕರು ಹಾಗೂ ಗಣೇಶೋತ್ಸವ ಸಮಿತಿಗಳು ನೈಸರ್ಗಿಕ ಮಣ್ಣು (Clay) ಹಾಗೂ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಲಾದ ಗಣೇಶ ಮೂರ್ತಿಗಳನ್ನು ಮಾತ್ರ ಬಳಸುವುದು.
5) ನೈಸರ್ಗಿಕ ಹಾಗೂ ವಿಷರಹಿತ ಬಣ್ಣಗಳಿಂದ ಅಲಂಕರಿಸಲಾದ ಮೂರ್ತಿಗಳಿಗೆ ಮಾತ್ರ ಆದ್ಯತೆ ನೀಡುವುದು.
6) ಯಾವುದೇ ಪರಿಸ್ಥಿತಿಯಲ್ಲಿಯೂ POP ಮೂರ್ತಿಗಳನ್ನು ಕೆರೆ, ನದಿ, ಕಾಲುವೆ, ಜಲಾಶಯ ಅಥವಾ ಇತರೆ ಜಲಮೂಲಗಳಲ್ಲಿ ವಿಸರ್ಜಿಸಬಾರದು.
7) ಸ್ಥಳೀಯ ಸಂಸ್ಥೆಗಳು ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಬಳಕೆಯ ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸುವುದು.

8) ಜಿಲ್ಲಾಧಿಕಾರಿಗಳು, ಪೊಲೀಸ್ ಇಲಾಖೆ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಅಧಿಕಾರಿಗಳು ಜಂಟಿಯಾಗಿ ಈ ಆದೇಶದ ಅನುಷ್ಠಾನವನ್ನು ಮೇಲ್ವಿಚಾರಣೆ ಮಾಡುವುದು.

9) ನಿಷೇಧಿತ ಮೂರ್ತಿಗಳ ಉತ್ಪಾದನೆ ಅಥವಾ ಮಾರಾಟ ಕಂಡುಬಂದಲ್ಲಿ ಸಂಬಂಧಿತ ಕಾನೂನುಗಳಡಿ ವಶಪಡಿಸಿಕೊಳ್ಳುವ ಹಾಗೂ ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು.

10) ಎಲ್ಲಾ ವ್ಯಾಪಾರಿಗಳು, ತಯಾರಕರು ಹಾಗೂ ಗಣೇಶೋತ್ಸವ ಸಮಿತಿಗಳು ಈ ಸುತ್ತೋಲೆಯಲ್ಲಿರುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

11) ಪರಿಸರ ಸ್ನೇಹಿ ಗಣೇಶ ಹಬ್ಬದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸ್ಥಳೀಯ ಸಂಸ್ಥೆಗಳು, ಶಾಲೆಗಳು, ಕಾಲೇಜುಗಳು ಹಾಗೂ ಸ್ವಯಂಸೇವಾ ಸಂಘಟನೆಗಳು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

ಈ ಸುತ್ತೋಲೆಯ ಅನುಷ್ಠಾನದ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಿತ ಇಲಾಖೆಗಳು ಗಣೇಶ ಹಬ್ಬದ ನಂತರ ಸಮಗ್ರ ವರದಿಯನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಸಲ್ಲಿಸುವುದು.

ಮೇಲ್ಕಂಡ ನಿರ್ದೇಶನಗಳನ್ನು ರಾಜ್ಯದ ಎಲ್ಲಾ ಸಂಬಂಧಿತ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ತಯಾರಕರು, ವ್ಯಾಪಾರಿಗಳು ಹಾಗೂ ಸಾರ್ವಜನಿಕರು ಕಡ್ಡಾಯವಾಗಿ ಪಾಲಿಸುವುದು. ಆದೇಶ ಉಲ್ಲಂಘಿಸುವವರ ವಿರುದ್ಧ ಜಾರಿಯಲ್ಲಿರುವ ಪರಿಸರ ಕಾನೂನುಗಳು ಹಾಗೂ ಸಂಬಂಧಿತ ನಿಯಮಗಳ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಸದಸ್ಯ ಕಾರ್ಯದರ್ಶಿ

**ಇವರಿಗೆ,**

1. ಮುಖ್ಯ ಆಯುಕ್ತರು, ಜಿ.ಬಿ.ಎ., ಎನ್.ಆರ್.ವೃತ್ತ, ನರಸಿಂಹರಾಜ ರಸ್ತೆ, ಬೆಂಗಳೂರು-02.
2. ಆಯುಕ್ತರು, ಬೆಂಗಳೂರು ನಗರ ಪೋಲೀಸ್, ನಂ.01, ಇನ್‌ಫ್ಯಾಂಟ್ರಿ ರಸ್ತೆ (ಸ್ಪರ್ಶ್ ಹಾಸ್ಪಿಟಲ್ ಹತ್ತಿರ), ಬೆಂಗಳೂರು-01.
3. ಆಯುಕ್ತರು, ಸಾರಿಗೆ ಇಲಾಖೆ, ನಂ.222, 2ನೇ ಮಹಡಿ, ಬಿ.ಎಂ.ಟಿ.ಸಿ., ಕಟ್ಟಡ, ಸೆಂಟ್ರಲ್ ಕಛೇರಿಗಳು (ಬಿಗ್ ಬಜ್ಹಾರ್ ಹತ್ತಿರ), ಶಾಂತಿನಗರ, ಬೆಂಗಳೂರು-27.
4. ಆಯುಕ್ತರು, ಎಲ್ಲಾ ಮಹಾನಗರ ಪಾಲಿಕೆಗಳು, ರವರ ಮಾಹಿತಿಗಾಗಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಕ್ಕಾಗಿ ಕೋರಿಕೆ.

5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 7ನೇ ಮಹಡಿ, ವಿ.ವಿ.ಟವರ್, ಡಾ॥ ಅಂಬೇಡ್ಕರ್ ರಸ್ತೆ, ಬೆಂಗಳೂರು, ರವರ ಮಾಹಿತಿಗಾಗಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಕ್ಕಾಗಿ ಕೋರಿಕೆ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ತಮ್ಮ ಅಧೀನ ಇಲಾಖೆಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಲಾಗಿದೆ.
7. ಎಲ್ಲಾ ಮುಖ್ಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ.
8. ಎಲ್ಲಾ ಪ್ರಾದೇಶಿಕ ಹಿರಿಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9. ಎಲ್ಲಾ ಪ್ರಾದೇಶಿಕ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ ಹಾಗೂ ಗಣೇಶ ಹಬ್ಬದ ಮುಂಚಿನ ಹಾಗೂ ನಂತರದ ಬಗ್ಗೆ ತೆಗೆದುಕೊಂಡ ಕ್ರಮಗಳ ವರದಿಗಳನ್ನು ಮಂಡಳಿಯ ಕೇಂದ್ರ ಕಛೇರಿಗೆ 15 ದಿನದೊಳಗಾಗಿ ಸಲ್ಲಿಸುವುದು.

**ಪ್ರತಿ:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು, ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು, ರವರ ಮಾಹಿತಿಗಾಗಿ ಸಲ್ಲಿಸಿದೆ.